# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1150 (1424)**

ಸದಸ್ಯರ ಹೆಸರು : **ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

ಉತ್ತರಿಸುವ ದಿನಾಂಕ : **22-08-2025**

**ಉತ್ತರಿಸುವವರು** : **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.**

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಬೆಂಗಳೂರು ನಗರ ಜಿಲ್ಲೆಯ ಗ್ರಾಮ ಪಂಚಾಯತ್ ಸದಸ್ಯರಿಗೆ, ಅಧ್ಯಕ್ಷರಿಗೆ ಮತ್ತು ಉಪಾಧ್ಯಕ್ಷರಿಗೆ ಪ್ರಸ್ತುತ ನೀಡುತ್ತಿರುವ ಗೌರವಧನವೆಷ್ಟು; ಇವರುಗಳಿಗೆ ಯಾವ ಯಾವ ಭತ್ಯೆಗಳನ್ನು ನೀಡಲಾಗುತ್ತಿದೆ. ಇವರುಗಳಿಗೆ ಗೌರವಧನ ಪರಿಷ್ಕರಣೆ ಯಾವಾಗ ಮಾಡಲಾಗಿರುತ್ತದೆ; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022ರಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಹೆಚ್ಚಿಸಿ ಆದೇಶಿಸಲಾಗಿರುತ್ತದೆ. (ಆದೇಶದ ಪ್ರತಿ ಲಗತ್ತಿಸಿದೆ) ಇದರನ್ವಯ ಪ್ರಸ್ತುತ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಪ್ರತಿ ಮಾಹೆಗೆ ರೂ.6000/-, ಉಪಾಧ್ಯಕ್ಷರಿಗೆ ರೂ.4000/- ಮತ್ತು ಸದಸ್ಯರಿಗೆ ರೂ.2000/- ಗಳನ್ನು ನೀಡಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 12 ಜಿಪಸ 2025, ದಿನಾಂಕ:16.01.2025ರನ್ವಯ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗೆ ಹಾಜರಾಗುವುದಕ್ಕೆ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರಿಗೆ ಪ್ರತೀ ಸಭೆಗೆ ರೂ.350/- ಉಪವೇಶನ ಶುಲ್ಕ ಪಾವತಿಸಲಾಗುತ್ತಿದೆ. |
| (ಆ) | ಗ್ರಾಮ ಪಂಚಾಯತ್ ಸದಸ್ಯರಿಗೆ ಪ್ರಸ್ತುತ ನೀಡುತ್ತಿರುವ ಗೌರವಧನ ಅತ್ಯಂತ ಕಡಿಮೆ ಇದ್ದು, ಇದನ್ನು ಹೆಚ್ಚು ಮಾಡಲು ಸರ್ಕಾರ ಚಿಂತಿಸಿದೆಯೇ; ಚಿಂತಿಸಿದ್ದಲ್ಲಿ ಎಷ್ಟು ಹೆಚ್ಚಳ ಮಾಡಲು ಕ್ರಮವಹಿಸಲಾಗುವುದು; | ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಇ) | ಗ್ರಾಮ ಪಂಚಾಯತ್ ಸದಸ್ಯರ ದೂರವಾಣಿ ಭತ್ಯೆ, ಪ್ರಯಾಣ ಭತ್ಯೆ ಹೆಚ್ಚಳ ಮಾಡಲು ಸರ್ಕಾರ ನಿರ್ಧರಿಸಿದೆ ಯಾವ ಕಾಲಮಿತಿಯಲ್ಲಿ ಇವರುಗಳ ವಿವಿಧ ಭತ್ಯೆಗಳನ್ನು ಪರಿಷ್ಕರಿಸಲಾಗುವುದು; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994ರನ್ವಯ ಗ್ರಾಮ ಪಂಚಾಯಿತಿಗಳ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆಯನ್ನು ನೀಡಲಾಗುತ್ತಿದೆ. ಸದರಿ ನಿಯಮಗಳನ್ನು ಪರಿಷ್ಕರಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |

| | | |
|---|---|---|
| (ಈ) | ಗ್ರಾಮ ಪಂಚಾಯತ್ ಸದಸ್ಯರಿಗೆ ಜೀವ ವಿಮಾ ಸೌಲಭ್ಯ, ಆರೋಗ್ಯ ವಿಮೆ ಸೌಲಭ್ಯ ನೀಡುವ ಬಗ್ಗೆ ಸರ್ಕಾರದ ನಿಲುವೇನು? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ ಚುನಾಯಿತ ಪ್ರತಿನಿಧಿಗಳಿಗೆ ಜೀವ ವಿಮೆ ಹಾಗೂ ಆರೋಗ್ಯ ವಿಮೆ ಸೌಲಭ್ಯಗಳಿಗೆ ಅವಕಾಶವಿರುವುದಿಲ್ಲ. ಆದರೆ, ಇವರುಗಳು ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯಡಿ ಆರೋಗ್ಯ ಶುಶ್ರೂಷೆಯ ಸವಲತ್ತುಗಳನ್ನು ಪಡೆಯಬಹುದಾಗಿರುತ್ತದೆ. |

**ಸಂಖ್ಯೆ:** ಗ್ರಾಅಪಂರಾ 156 ಜಿಪಸ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು